**All India Radio: Bangalore**
**National Bulletin In Kannada**
**15.03.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.03.2026 7.35 am**

**<>><><*><><<>**

ಮುಖ್ಯಾಂಶಗಳು

**೧. ಹಡಗುಗಳ ಸುರಕ್ಷತೆಗಾಗಿ ಪರ್ಷಿಯನ್ ಕೊಲ್ಲಿಯ ಬಳಿ ಯುದ್ಧ ನೌಕೆಗಳನ್ನು ನಿಯೋಜಿಸಿದ ಭಾರತೀಯ ನೌಕಾಪಡೆ**

**೨. ಹಾರ್ಮುಜ್ ಜಲಸಂಧಿ ಸಮೀಪ ಯುದ್ಧ ನೌಕೆಗಳನ್ನು ಕಳುಹಿಸುವಂತೆ ವಿವಿಧ ರಾಷ್ಟ್ರಗಳಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕರೆ**

**೩. ಅಫ್ಘಾನಿಸ್ತಾನ ಮೇಲಿನ ಪಾಕಿಸ್ತಾನ ವಾಯುದಾಳಿ ಖಂಡಿಸಿದ ಭಾರತ**

**೪. ಬಿಸಿಸಿಐ ನಿಂದ ಇಂದು ಸಾಧಕ ಕ್ರಿಕೆಟ್ ತಾರೆಯರಿಗೆ ನಮನ್ ಪ್ರಶಸ್ತಿ-೨೦೨೬ ಪ್ರದಾನ**

**<>><><*><><<>**

ಭಾರತೀಯ ನೌಕಾಪಡೆಯ ಹಲವಾರು ಯುದ್ಧನೌಕೆಗಳನ್ನು ಪರ್ಷಿಯನ್ ಕೊಲ್ಲಿಯ ಬಳಿ ನಿಯೋಜಿಸಲಾಗಿದ್ದು, ಭಾರತದ ಕಡೆಗೆ ಬರುವ ವ್ಯಾಪಾರಿ ಹಡಗುಗಳಿಗೆ ಸಹಾಯ ಮಾಡಲು ಸಿದ್ಧವಾಗಿವೆ. ಮೂಲಗಳ ಪ್ರಕಾರ, ಭಾರತೀಯ ನೌಕಾಪಡೆಯ ಯುದ್ಧನೌಕೆಗಳು ವ್ಯಾಪಾರಿ ಹಡಗುಗಳಿಗೆ ಅಗತ್ಯವಿರುವ ಸಹಾಯವನ್ನು ಒದಗಿಸಲು ಸಿದ್ಧವಾಗಿವೆ. ನಿನ್ನೆ ಮುಂಜಾನೆ, ಎಲ್‌ಪಿಜಿ ಸಾಗಿಸುವ ಭಾರತೀಯ ಧ್ವಜ ಹೊತ್ತ ಎರಡು ಹಡಗುಗಳಿಗೆ ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಗೆ ಇರಾನಿನ ಅಧಿಕಾರಿಗಳು ಅನುಮತಿ ನೀಡಿದರು.

**<>><><*><><<>**

ಭಾರತೀಯ ಧ್ವಜ ಹೊತ್ತ ಎರಡು ಹಡಗುಗಳಾದ ಶಿವಾಲಿಕ್ ಮತ್ತು ನಂದಾ ದೇವಿ ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿವೆ. ಈ ಕುರಿತು ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಬಂದರುಗಳು, ಹಡಗು ಮತ್ತು ಜಲಮಾರ್ಗಗಳ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿನ್ಹಾ, ಈ ಹಡಗುಗಳು ೯೨ ಸಾವಿರದ ೭೦೦ ಮೆಟ್ರಿಕ್ ಟನ್ ಎಲ್‌ಪಿಜಿಯನ್ನು ಸಾಗಿಸುತ್ತಿವೆ. ಈ ತಿಂಗಳ ೧೬ ಮತ್ತು ೧೭ ರಂದು ಹಡಗುಗಳು ಮುಂದ್ರಾ ಮತ್ತು ಕಾಂಡ್ಲಾ ಬಂದರಿಗೆ ಆಗಮಿಸಲಿವೆ ಎಂದು ತಿಳಿಸಿದ್ದಾರೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಮಾತನಾಡಿ, ದೇಶಾದ್ಯಂತದ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಸಮರ್ಪಕವಾಗಿ ಲಭ್ಯವಿದೆ. ದೇಶದಲ್ಲಿ ಸಾಕಷ್ಟು ಕಚ್ಚಾ ತೈಲ ದಾಸ್ತಾನುಗಳಿವೆ ಎಂದು ಮಾಹಿತಿ ನೀಡಿದರು. ಎಲ್‌ಪಿಜಿ ಸಿಲಿಂಡರ್‌ಗಳ ಲಭ್ಯತೆಯ ಬಗ್ಗೆ ನಾಗರಿಕರು ಆತಂಕಪಡುವ ಅಗತ್ಯವಿಲ್ಲ. ರಾಜ್ಯ ಸರ್ಕಾರಗಳಿಗೆ ವಾಣಿಜ್ಯ ಸಿಲಿಂಡರ್‌ಗಳನ್ನು ವಿಲೇವಾರಿ ಮಾಡಲಾಗಿದೆ. ೨೯ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ವಾಣಿಜ್ಯ ಸಿಲಿಂಡರ್‌ಗಳ ವಿತರಣೆ ಪ್ರಾರಂಭವಾಗಿದೆ ಎಂದು ಅವರು ತಿಳಿಸಿದರು. ನಗರ ಪ್ರದೇಶಗಳಲ್ಲಿ ಹಿಂದಿನ ವಿತರಣಾ ದಿನಾಂಕದಿಂದ ೨೫ ದಿನಗಳ ನಂತರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ೪೫ ದಿನಗಳ ನಂತರ ಮಾತ್ರ ಸಿಲಿಂಡರ್‌ಗಳನ್ನು ಬುಕ್ ಮಾಡಬಹುದು. ನಾಗರಿಕರು ಡಿಜಿಟಲ್ ರೂಪದಲ್ಲಿ ಸಿಲಿಂಡರ್‌ಗಳನ್ನು ಬುಕ್ ಮಾಡಬೇಕು ಮತ್ತು ವಿತರಕರ ಮಳಿಗೆ ಹೊರಗೆ ಸರತಿ ಸಾಲಿನಲ್ಲಿ ನಿಲ್ಲುವುದನ್ನು ತಪ್ಪಿಸಬೇಕು ಎಂದು ಸುಜಾತಾ ಶರ್ಮಾ ಮನವಿ ಮಾಡಿದರು.

<>><><*><><<>

ಇರಾನ್ ಜೊತೆಗಿನ ಯುದ್ಧ ಮೂರನೇ ವಾರಕ್ಕೆ ಕಾಲಿಟ್ಟಿರುವುದರಿಂದ, ಜಾಗತಿಕ ತೈಲ ಪೂರೈಕೆಗೆ ನಿರ್ಣಾಯಕವಾದ ಕಿರಿದಾದ ಹಡಗು ಮಾರ್ಗ ಹಾರ್ಮುಜ್ ಜಲಸಂಧಿಯ ಪ್ರದೇಶದಲ್ಲಿ ಸುರಕ್ಷತೆಗಾಗಿ ಯುದ್ಧ ನೌಕೆಗಳನ್ನು ಕಳುಹಿಸುವಂತೆ ವಿವಿಧ ರಾಷ್ಟ್ರಗಳಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕರೆ ನೀಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಡೊನಾಲ್ಡ್ ಟ್ರಂಪ್, ಚೀನಾ, ಫ್ರಾನ್ಸ್, ಜಪಾನ್, ದಕ್ಷಿಣ ಕೊರಿಯಾ, ಬ್ರಿಟನ್ ಮತ್ತು ಇತರ ದೇಶಗಳನ್ನು ಹಾರ್ಮುಜ್ ಜಲಸಂಧಿಗೆ ಯುದ್ಧ ನೌಕೆಗಳನ್ನು ಕಳುಹಿಸುವಂತೆ ಒತ್ತಾಯಿಸಿದರು. ಇರಾನ್‌ನ ಕರಾವಳಿಯ ಮೇಲೆ ಬಾಂಬ್ ದಾಳಿ ಮಾಡುವುದನ್ನು ಅಮೆರಿಕ ಮುಂದುವರಿಸುತ್ತದೆ ಹಾಗೂ ಇರಾನಿನ ಹಡಗುಗಳು ಮತ್ತು ದೋಣಿಗಳನ್ನು ಗುರಿಯಾಗಿಸುತ್ತದೆ ಎಂದು ತಿಳಿಸಿದರು. ಫೆಬ್ರವರಿ ೨೮ ರಿಂದ, ಇರಾನ್ ಮೇಲೆ ಅಮೆರಿಕ ಮತ್ತು ಇಸ್ರೇಲ್ ಜಂಟಿ ದಾಳಿಯನ್ನು ಪ್ರಾರಂಭಿಸಿವೆ ಮತ್ತು ಇರಾನ್‌ನ ಪ್ರತೀಕಾರದೊಂದಿಗೆ, ಅದು ಇಡೀ ಗಲ್ಫ್ ಪ್ರದೇಶಕ್ಕೂ ವಿಸ್ತರಿಸಿದೆ. ಹಾರ್ಮುಜ್ ಜಲಸಂಧಿಯನ್ನು ಇರಾನ್ ನಿರ್ಬಂಧಿಸಿದ ನಂತರ ಜಾಗತಿಕ ತೈಲ ಮತ್ತು ಅನಿಲ ಬೆಲೆಗಳು ಗಗನಕ್ಕೇರಿವೆ.

<>><><*><><<>

ಆಯಕಟ್ಟಿನ ಮಹತ್ವದ ಹಾರ್ಮುಜ್ ಜಲಸಂಧಿಯು ಅಂತಾರಾಷ್ಟ್ರೀಯ ಹಡಗು ಸಾಗಣೆಗೆ ಇನ್ನೂ ಕಾರ್ಯನಿರ್ವಹಿಸುತ್ತಿದೆ. ಆದರೆ ಅಮೆರಿಕ ಮತ್ತು ಇಸ್ರೇಲ್‌ಗೆ ಸಂಬಂಧಿಸಿದ ಹಡಗುಗಳಿಗೆ ಜಲಮಾರ್ಗದ ಮೂಲಕ ಹಾದುಹೋಗಲು ಅನುಮತಿ ಇಲ್ಲ ಎಂದು ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಹೇಳಿದ್ದಾರೆ. ಇತ್ತೀಚಿನ ಮಿಲಿಟರಿ ಬೆಳವಣಿಗೆಗಳ ನಂತರ ಈ ಪ್ರದೇಶದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಅವರಿಂದ ಈ ಹೇಳಿಕೆಗಳು ಬಂದಿವೆ. ಖಾಸಗಿ ಸುದ್ದಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಅಬ್ಬಾಸ್ ಅರಘ್ಚಿ, ಸಮುದ್ರ ಮಾರ್ಗವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಅನೇಕ ಭಾರತೀಯ ಹಡಗುಗಳು ಸೇರಿದಂತೆ ನೂರಾರು ಹಡಗುಗಳು ಪರ್ಷಿಯನ್ ಕೊಲ್ಲಿ ಮತ್ತು ಓಮನ್ ಕೊಲ್ಲಿಯ ನಡುವಿನ ಕಿರಿದಾದ ಸಮುದ್ರ ಮಾರ್ಗದಲ್ಲಿ ಸಿಲುಕಿಕೊಂಡಿರುವ ನಡುವೆ ಇರಾನ್ ಸಚಿವರಿಂದ ಈ ಸ್ಪಷ್ಟನೆ ಹೊರಬಿದ್ದಿದೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ಕುರಿತು ಸಾಮಾನ್ಯ ನಿಲುವಿಗೆ ಬರಲು ಭಾರತ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳೊಂದಿಗೆ ಸಕ್ರಿಯವಾಗಿ ತೊಡಗಿಸಿಕೊಂಡಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಪಶ್ಚಿಮ ಏಷ್ಯಾದ ಪ್ರಸ್ತುತ ಸಂಘರ್ಷದಲ್ಲಿ ಕೆಲವು ಬ್ರಿಕ್ಸ್ ಸದಸ್ಯ ರಾಷ್ಟ್ರಗಳು ನೇರವಾಗಿ ಭಾಗಿಯಾಗಿವೆ. ಸದಸ್ಯ ರಾಷ್ಟ್ರಗಳ ನಡುವಿನ ವ್ಯತ್ಯಾಸಗಳು ಗುಂಪಿಗೆ ಒಮ್ಮತವನ್ನು ರೂಪಿಸಲು ಕಷ್ಟಕರವಾಗಿದೆ ಎಂದು ಅಭಿಪ್ರಾಯಪಟ್ಟರು. ವಿಕಸನಗೊಳ್ಳುತ್ತಿರುವ ಪರಿಸ್ಥಿತಿಯ ಕುರಿತು ಚರ್ಚಿಸಲು ಬ್ರಿಕ್ಸ್ ರಾಷ್ಟ್ರಗಳು ಇತ್ತೀಚಿನ ವರ್ಚುವಲ್ ಸಭೆಯನ್ನು ಮಾರ್ಚ್ ೧೨ ರಂದು ನಡೆಸಲಾಯಿತು ಎಂದು ರಣಧೀರ್ ಜೈಸ್ವಾಲ್ ತಿಳಿಸಿದರು.

<>><><*><><<>

ಪ್ರಧಾನ ಮಂತ್ರಿ ನರೇಂದ್ರ ಮೋದಿ ಇಂದಿನಿಂದ ಆರಂಭವಾಗಲಿರುವ 'ಮೈ ಭಾರತ್ ಬಜೆಟ್ ಕ್ವೆಸ್ಟ್ ೨೦೨೬' ರ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶ ಮಟ್ಟದ ವಿಜೇತರೊಂದಿಗೆ ಸಂವಾದ ನಡೆಸಲಿದ್ದಾರೆ. ಈ ಉಪಕ್ರಮವು ಯುವಜನರು ಕೇಂದ್ರ ಬಜೆಟ್ ಬಗ್ಗೆ ಚರ್ಚಿಸಲು ಮತ್ತು ವಿಕಸಿತ ಭಾರತ ಅಥವಾ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವ ಬಗ್ಗೆ ತಮ್ಮ ದೃಷ್ಟಿಕೋನಗಳನ್ನು ಹಂಚಿಕೊಳ್ಳಲು ಪ್ರೋತ್ಸಾಹಿಸುತ್ತದೆ.

<>><><*><><<>

ಅಫ್ಘಾನಿಸ್ತಾನದ ಭೂಪ್ರದೇಶದಲ್ಲಿ ಪಾಕಿಸ್ತಾನ ನಡೆಸಿದ ವಾಯುದಾಳಿಗಳನ್ನು ಭಾರತ ಖಂಡಿಸಿದೆ. ಈ ದಾಳಿಯು ಹಲವಾರು ನಾಗರಿಕರ ಸಾವಿಗೆ ಮತ್ತು ನಾಗರಿಕ ಮೂಲಸೌಕರ್ಯ ನಾಶಕ್ಕೆ ಕಾರಣವಾಯಿತು. ಸಾಮಾಜಿಕ ಜಾಲತಾಣದಲ್ಲಿ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಅಫ್ಘಾನಿಸ್ತಾನದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯನ್ನು ಪಾಕಿಸ್ತಾನ ಸಂಪೂರ್ಣವಾಗಿ ಗೌರವಿಸಬೇಕು ಎಂಬುದನ್ನು ಭಾರತ ಪುನರುಚ್ಚರಿಸುತ್ತದೆ ಎಂದು ಹೇಳಿದರು.

<><><*><><<>

ಮಾಜಿ ಮುಖ್ಯಮಂತ್ರಿ ಹಾಗೂ ಜಮ್ಮು ಮತ್ತು ಕಾಶ್ಮೀರ ನ್ಯಾಷನಲ್ ಕಾನ್ಫರೆನ್ಸ್ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಅವರ ಮೇಲೆ ನಡೆದ ಗುಂಡಿನ ದಾಳಿಗೆ ಯತ್ನಿಸಿದ ಪ್ರಕರಣದ ತನಿಖೆಗಾಗಿ ಜಮ್ಮು ಮತ್ತು ಕಾಶ್ಮೀರ ಪೊಲೀಸರು, ವಿಶೇಷ ತನಿಖಾ ತಂಡ-ಎಸ್ಐಟಿ ರಚಿಸಿದೆ. ಜಮ್ಮು-ಸಾಂಬಾ-ಕಥುವಾ ಶ್ರೇಣಿಯ ಪೊಲೀಸ್ ಉಪ ಮಹಾನಿರೀಕ್ಷಕರ ಮೇಲ್ವಿಚಾರಣೆಯಲ್ಲಿ ಎಸ್ಐಟಿಯನ್ನು ರಚಿಸಲಾಗಿದೆ. ಸಂಪೂರ್ಣ ತನಿಖೆ ನಡೆಸಿ, ನಿಗದಿತ ಸಮಯದೊಳಗೆ ತಂಡಕ್ಕೆ ತನಿಖೆ ಪೂರ್ಣಗೊಳಿಸಲು ನಿರ್ದೇಶಿಸಲಾಗಿದೆ. ಮಾರ್ಚ್ ೧೧ ರಂದು ಜಮ್ಮುವಿನ ಔತಣಕೂಟದ ಸಭಾಂಗಣದಲ್ಲಿ ನಡೆದ ಮದುವೆ ಸಮಾರಂಭದಲ್ಲಿ ಫಾರೂಕ್ ಅಬ್ದುಲ್ಲಾ ಭಾಗಿಯಾಗಿದ್ದ ಸಂದರ್ಭದಲ್ಲಿ ಅವರ ಮೇಲೆ ದಾಳಿ ಯತ್ನ ನಡೆಸಲಾಗಿತ್ತು.

<><><*><><<>

ಇಂದು ವಿಶ್ವ ಗ್ರಾಹಕ ಹಕ್ಕುಗಳ ದಿನ. 'ಸುರಕ್ಷಿತ ಉತ್ಪನ್ನಗಳು; ಆತ್ಮವಿಶ್ವಾಸದ ಗ್ರಾಹಕರು' ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ. ಇದು ಗ್ರಾಹಕರ ಹಕ್ಕುಗಳು ಮತ್ತು ಅಗತ್ಯತೆಗಳ ಕುರಿತು, ಜಾಗತಿಕವಾಗಿ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ. ಗ್ರಾಹಕರ ಹಕ್ಕುಗಳನ್ನು ಗೌರವಿಸಬೇಕು ಮತ್ತು ರಕ್ಷಿಸಬೇಕು. ಗ್ರಾಹಕರ ಹಕ್ಕುಗಳನ್ನು ದುರ್ಬಲಗೊಳಿಸುವ, ಮಾರುಕಟ್ಟೆಯ ದುರುಪಯೋಗ ಮತ್ತು ಸಾಮಾಜಿಕ ಅನ್ಯಾಯಗಳ ವಿರುದ್ಧ ಪ್ರತಿಭಟಿಸಲು ವಿಶ್ವಸಂಸ್ಥೆ ಮೀಸಲಿರಿಸಿದ ದಿನ. ಗ್ರಾಹಕರ ಅಂತಾರಾಷ್ಟ್ರೀಯ ವೇದಿಕೆ, ೨೦೨೬ರ ಗ್ರಾಹಕರ ಹಕ್ಕುಗಳ ದಿನಾಚರಣೆಯಂದು, 'ಉತ್ಪನ್ನಗಳ ಸುರಕ್ಷತೆ, ಪ್ರಮುಖ ಮಾನವ ಹಕ್ಕು' ಎಂಬ ಅಭಿಯಾನ ಹಾಗೂ ಡಿಜಿಟಲ್ ಮಾರುಕಟ್ಟೆಯಲ್ಲಿ, ಬಲವಾದ ನಿಯಮಗಳ ಅನುಷ್ಠಾನವನ್ನು ಖಾತ್ರಿಪಡಿಸಲು ಒತ್ತಾಯಿಸಿದೆ.

<><><*><><<>

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ಇಂದು ನವದೆಹಲಿಯಲ್ಲಿ ನಡೆಯಲಿರುವ ಸಮಾರಂಭದಲ್ಲಿ ಭಾರತೀಯ ಕ್ರಿಕೆಟ್ ತಾರೆಯರಿಗೆ ಪ್ರತಿಷ್ಠಿತ ನಮನ್ ಪ್ರಶಸ್ತಿ-೨೦೨೬ ಪ್ರದಾನ ಮಾಡಲಿದೆ. ಸಮಾರಂಭದಲ್ಲಿ, ಭಾರತೀಯ ಕ್ರಿಕೆಟ್‌ಗೆ ಅಸಾಧಾರಣ ಸೇವೆ ಸಲ್ಲಿಸಿದ್ದಕ್ಕಾಗಿ ಕ್ರಿಕೆಟ್ ದಂತಕಥೆಗಳಾದ ರೋಜರ್ ಬಿನ್ನಿ ಮತ್ತು ರಾಹುಲ್ ದ್ರಾವಿಡ್ ಅವರು ಬಿಸಿಸಿಐ ನೀಡುವ ಅತ್ಯುನ್ನತ ಗೌರವವಾದ ಕರ್ನಲ್ ಸಿ.ಕೆ.ನಾಯುಡು ಜೀವಮಾನ ಸಾಧನೆ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಇದೇ ವೇಳೆ, ಮಹಿಳಾ ಕ್ರಿಕೆಟ್‌ನಲ್ಲಿ ಅಸಾಧಾರಣ ಸಾಧನೆಗಾಗಿ ಭಾರತ ಮಹಿಳಾ ತಂಡದ ಮಾಜಿ ನಾಯಕಿ ಮಿಥಾಲಿ ರಾಜ್ ಅವರಿಗೆ ಮಹಿಳಾ ವಿಭಾಗದಲ್ಲಿ ಬಿಸಿಸಿಐ ಜೀವಮಾನ ಸಾಧನೆ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು.

<><><*><><<>

ಹೈದರಾಬಾದ್‌ನ ಜಿ.ಎಂ.ಸಿ. ಬಾಲಯೋಗಿ ಹಾಕಿ ಮೈದಾನದಲ್ಲಿ ನಿನ್ನೆ ನಡೆದ ಎಫ್ಐಎಚ್ ಮಹಿಳಾ ಹಾಕಿ ವಿಶ್ವಕಪ್ ಅರ್ಹತಾ ಪಂದ್ಯಾವಳಿಯ ಫೈನಲ್‌ನಲ್ಲಿ ಭಾರತ, ಇಂಗ್ಲೆಂಡ್ ತಂಡದ ವಿರುದ್ಧ ೦-೨ ಗೋಲುಗಳಿಂದ ಪರಾಭವಗೊಂಡಿತು. ಆದರೂ ಭಾರತ, ಮಹಿಳಾ ಹಾಕಿ ವಿಶ್ವಕಪ್‌ಗೆ ಅರ್ಹತೆ ಪಡೆದಿದೆ. ವಿಶ್ವಕಪ್ ಪಂದ್ಯಾವಳಿಯನ್ನು ನೆದರ್‌ಲ್ಯಾಂಡ್ಸ್ ಮತ್ತು ಬೆಲ್ಜಿಯಂ ಜಂಟಿಯಾಗಿ ಆಯೋಜಿಸಲಿವೆ.

<>><><*><><<>

ಕ್ಯಾಲಿಫೋರ್ನಿಯಾದಲ್ಲಿ ನಡೆಯುತ್ತಿರುವ ಇಂಡಿಯನ್ ವೇಲ್ಸ್ ಟೆನ್ನಿಸ್ ಪಂದ್ಯಾವಳಿಯಲ್ಲಿ ವಿಶ್ವದ ಅಗ್ರ ಶೇಯಾಂಕಿತ ಆಟಗಾರ್ತಿ ಅರೀನಾ ಸಬಲೆಂಕಾ ಅವರು ೧೪ನೇ ಶ್ರೇಯಾಂಕಿತೆ ಲಿಂಡಾ ನೇಸೋವಾ ಅವರನ್ನು ೬-೩, ೬-೪, ಅಂತರಗಳಿಂದ ಮಣಿಸಿದರು. ಈ ಪಂದ್ಯಾವಳಿಯ ೧೬ ಪಂದ್ಯಗಳ ಪೈಕಿ, ೧೫ ಪಂದ್ಯಗಳಲ್ಲಿ ಸಬಲೆಂಕಾ ಜಯಿಸಿದ್ದಾರೆ. ಇಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ಸಬಲೆಂಕಾ ಮತ್ತು ಎಲೆನಾ ರಿಬಾಕಿನಾ ಮುಖಾಮುಖಿಯಾಗಲಿದ್ದಾರೆ.

<>><><*><><<>

ಪಶ್ಚಿಮ ಬಂಗಾಳದ ಕೋಲ್ಕತ್ತಾದಲ್ಲಿ ನಿನ್ನೆ ಸುಮಾರು ೧೮ ಸಾವಿರದ ೬೮೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ರಾಷ್ಟ್ರಕ್ಕೆ ಸಮರ್ಪಿಸಿದರು.  ಈ ಪ್ರದೇಶದ ರಸ್ತೆ ಮೂಲಸೌಕರ್ಯಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಸುಮಾರು ೧೬ ಸಾವಿರದ ೯೯೦ ಕೋಟಿ ರೂಪಾಯಿ ವೆಚ್ಚದ ಒಟ್ಟು ೪೨೦ ಕಿಲೋಮೀಟರ್ ಉದ್ದದ ಹಲವು ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**